ಶನಿವಾರ 24.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 125
Digital Varthe Kannada Daily
Volume 01 - Issue 125
Saturday , 24.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಮದುವೆಯಾಗಿ 2 ತಿಂಗಳಿಗೆ ಹತ್ಮಹತ್ಯೆ ಮಾಡಿಕೊಂಡ ಯುವತಿ



**ಕಲಬುರಗಿ:**ಕುಟುಂಬದಿಂದ ದೂರವಾಗಿರುವ ಭಾವನೆ ಹಾಗೂ ಹಳ್ಳಿ-ನಗರ ಜೀವನದ ಅಂತರ ದಿಂದ ಮನನೊಂದು, ಎರಡು ತಿಂಗಳ ಹಿಂದಷ್ಟೇ ವಿವಾಹ ವಾಗಿದ್ದ ನವವಿವಾಹಿತೆ ಯೊಬ್ಬಳು ಆತ್ಮಹತ್ಯೆಗೆ ಶರಣಾದ ಹೃದಯವಿದ್ರಾವಕ ಘಟನೆ ಕಲಬುರಗಿ ನಗರದ ಆಜಾದಪುರ ಬಡಾವಣೆಯಲ್ಲಿ ನಡೆದಿದೆ. ಮೃತ ಯುವತಿಯನ್ನು ಅನಸೂಯಾ ಎಂದು ಗುರುತಿಸಲಾಗಿದ್ದು, ಮನೆಯೊಳಗೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ. ಈ ದುರ್ಘಟನೆ ಕುಟುಂಬಸ್ಥರನ್ನು ತೀವ್ರ ಶೋಕಕ್ಕೆ ತಳ್ಳಿದೆ.

ಅನಸೂಯಾ ಅತ್ತೆ ಮಗ ಅವಿನಾಶ್ ಅವರೊಂದಿಗೆ ಎರಡು ತಿಂಗಳ ಹಿಂದೆ ಸಪ್ತಪದಿ ತುಳಿದಿದ್ದಳು. ಮದುವೆಯ ಆರಂಭಿಕ ದಿನಗಳಲ್ಲಿ ಎಲ್ಲವೂ ಸರಾಗವಾಗಿಯೇ ನಡೆಯುತ್ತಿತ್ತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಆದರೆ ದಿನಗಳು ಕಳೆದಂತೆ, ಆಕೆಯ ಮನಸ್ಸಿನಲ್ಲಿ ಅಸಮಾಧಾನ ಮತ್ತು ಬೇಸರ ಹೆಚ್ಚಾಗತೊಡಗಿತ್ತು. ಅನಸೂಯಾಗೆ ಮೂವರು ಸಹೋದರಿಯರು ಇದ್ದು, ಅವರೆಲ್ಲರೂ ಮದುವೆಯಾಗಿ ನಗರಗಳಲ್ಲಿ ನೆಲೆಸಿದ್ದರು. ತಾನು ಮಾತ್ರ ಹಳ್ಳಿಯಲ್ಲಿ ಜೀವನ ನಡೆಸಬೇಕಾಗಿರುವುದೇ ಆಕೆಯ ಮನಸ್ಸಿಗೆ ತೀವ್ರ ನೋವು ತಂದಿತ್ತು ಎನ್ನಲಾಗಿದೆ.

ಈ ವಿಚಾರ ದಿನೇ ದಿನೇ ಅನಸೂಯಾಳನ್ನು ಮಾನಸಿಕವಾಗಿ ಕಾಡತೊಡಗಿತ್ತು. ತಾನು ಉತ್ತಮ ವಿದ್ಯಾಭ್ಯಾಸ ಪಡೆದಿದ್ದರೂ ಹಳ್ಳಿಯಲ್ಲಿ ನೆಲೆಸಬೇಕಾದ ಪರಿಸ್ಥಿತಿಗೆ ಒಳಗಾಗಿದ್ದೇನೆ ಎಂಬ ಕೊರಗು ಆಕೆಯನ್ನು ಒಳಗೊಳಗೇ ನುಂಗತೊಡಗಿತ್ತು. ತವರಿಗೆ ಭೇಟಿ ನೀಡಿದ ಸಂದರ್ಭಗಳಲ್ಲಿ ಈ ವಿಷಯವನ್ನು ಆಕೆ ಒಂದೆರಡು ಬಾರಿ ಪೋಷಕರ ಬಳಿ ಹೇಳಿಕೊಂಡಿದ್ದಾಳೆ. ಈ ವೇಳೆ ಪೋಷಕರು ಆಕೆಗೆ ಸಮಾಧಾನ ಹೇಳಿ, ಜೀವನದಲ್ಲಿ ಹೊಂದಾಣಿಕೆ ಅಗತ್ಯವೆಂದು ಬುದ್ಧಿಮಾತು ಹೇಳಿದ್ದಾರೆ ಎನ್ನಲಾಗಿದೆ.

ಮದುವೆಗೆ ಮುನ್ನ ಅನಸೂಯಾ ಬೆಂಗಳೂರಿನಲ್ಲಿ ಸುಮಾರು ಒಂದು ವರ್ಷ ಕೆಲಸ ಮಾಡಿದ್ದಳು. ಹೀಗಾಗಿ ನಗರ ಜೀವನಕ್ಕೆ ಹೊಂದಿಕೊಂಡಿದ್ದ ಆಕೆಗೆ ಹಳ್ಳಿಯ ಜೀವನಶೈಲಿ ಅಷ್ಟಾಗಿ ಇಷ್ಟವಾಗಿರಲಿಲ್ಲ. ಇತ್ತ ಪ್ರೀತಿಸಿದ ವ್ಯಕ್ತಿಯನ್ನು ಬಿಡಲೂ ಸಾಧ್ಯವಾಗದೆ, ಮದುವೆಯಾದ ಬಳಿಕ ಸಿಟಿ ವ್ಯಾಮೋಹ ಆಕೆಯನ್ನು ಇನ್ನಷ್ಟು ಕಾಡತೊಡಗಿದೆ ಎಂದು ತಿಳಿದುಬಂದಿದೆ. ಆದರೂ ಗಂಡನ ಮನೆ ಕಲಬುರಗಿಯ ಆಜಾದಪುರ ಬಡಾವಣೆಯಲ್ಲೇ ಜೀವನ ಮುಂದುವರಿಸುತ್ತಿದ್ದಳು.

ಈ ಮಧ್ಯೆ, ನಿನ್ನೆ ಮಧ್ಯಾಹ್ನ ಗಂಡನ ಮನೆಯಲ್ಲಿ ಯಾರೂ ಇಲ್ಲದ ಸಮಯದಲ್ಲಿ ಅನಸೂಯಾ ಮನನೊಂದು ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಷಯ ತಿಳಿದ ಕುಟುಂಬಸ್ಥರು ಹಾಗೂ ಸ್ಥಳೀಯರು ಸ್ಥಳಕ್ಕೆ ಧಾವಿಸಿ, ಆಕೆಯನ್ನು ಆಸ್ಪತ್ರೆಗೆ ಕರೆದೊಯ್ಯಲು ಯತ್ನಿಸಿದರೂ ಆಗಲೇ ಆಕೆ ಮೃತಪಟ್ಟಿದ್ದಾಳೆ ಎಂದು ವೈದ್ಯರು ದೃಢಪಡಿಸಿದ್ದಾರೆ.

ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆತ್ಮಹತ್ಯೆಗೆ ಕಾರಣಗಳ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ. ನವವಿವಾಹಿತೆಯ ಆತ್ಮಹತ್ಯೆ ಪ್ರಕರಣ ಸ್ಥಳೀಯವಾಗಿ ತೀವ್ರ ಆಘಾತ ಮೂಡಿಸಿದ್ದು, ಕುಟುಂಬಸ್ಥರ ಆಕ್ರಂದನ ಕಲ್ಲು ಕರಗಿಸುವಂತಿದೆ.

## ಹುಬ್ಬಳ್ಳಿಯ ಮಾಲ್‌ನಲ್ಲಿ ಅಗ್ನಿ ಅವಘಡ: ಅಕ್ಕಪಕ್ಕದ ಮನೆಗೂ ತಗುಲಿದೆ ಕಿಡಿ



**ಹುಬ್ಬಳ್ಳಿ:** ಅದು ನಗರದ ಪ್ರಮುಖ ವ್ಯಾಪಾರ ಏರಿಯಾ. ಆದರೆ ರಾತ್ರಿ ಸಮಯದಲ್ಲಿ ನಾಲ್ಕು ಅಂತಸ್ತಿನ ಮಾಲ್‌ನಲ್ಲಿ ಹೊತ್ತಿಕೊಂಡ ಬೆಂಕಿ ಕೆಲಹೊತ್ತು ಆತಂಕದ ವಾತಾವರಣ ನಿರ್ಮಾಣ ಮಾಡಿತ್ತು. ಮಾಲ್‌ನಲ್ಲಿದ್ದ ಲಕ್ಷಾಂತರ ಮೌಲ್ಯದ ವಸ್ತುಗಳು ಸುಟ್ಟು ಕರಕಲಾಗಿದ್ದರೆ, ಮತ್ತೊಂದೆಡೆ ಸುತ್ತಮುತ್ತಲಿನ ವಸತಿ ಕಟ್ಟಡಗಳಿಗೂ ಬೆಂಕಿ ವ್ಯಾಪಿಸಲು ಆರಂಭಿಸಿತ್ತು. ಅಷ್ಟರಲ್ಲಿ ಸ್ಥಳಕ್ಕೆ ಬಂದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಸಫಲರಾಗಿದ್ದಾರೆ.

**ನಡೆದದ್ದೇನು?**ಮರಾಠ ಗಲ್ಲಿಯಲ್ಲಿರುವ ಸುಪ್ರಸಿದ್ಧ ಸುಖಸಾಗರ ಮಾಲ್‌ನಲ್ಲಿ ಕಳೆದ ರಾತ್ರಿ 12 ಗಂಟೆ ಸಮಯಕ್ಕೆ ಅಗ್ನಿ ಅವಘಡ ಸಂಭವಿಸಿದೆ. ಮೊದಲಿಗೆ ವಿದ್ಯುತ್ ಹೋಗಿತ್ತಂತೆ, ಮತ್ತೆ ವಿದ್ಯುತ್ ಬರುತ್ತಿದ್ದಂತೆ ಮಾಲ್‌ನ 4ನೇ ಮಹಡಿಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿದೆ. ನೋಡನೋಡುತ್ತಿದ್ದಂತೆ ಇಡೀ ಮಾಲ್‌ಗೆ ಬೆಂಕಿ ಆವರಿಸಿಕೊಳ್ಳಲು ಆರಂಭವಾಗಿತ್ತು. ನಾಲ್ಕನೆ ಮಹಡಿಯಲ್ಲಿ ಪಾದರಕ್ಷೆಗಳು, ಬಟ್ಟೆ ಸೇರಿದಂತೆ ಅನೇಕ ಮಳಿಗೆಗಳು ಇದಿದ್ದರಿಂದ ಬೆಂಕಿ ತೀವ್ರವಾಗಿ ಹೊತ್ತಿಕೊಂಡಿತ್ತು. ಅದು ಮೂರನೇ ಮಹಡಿ ಮತ್ತು ಸುತ್ತಮುತ್ತಲಿನ ಕಟ್ಟಡಕ್ಕ ಕೂಡ ವ್ಯಾಪಿಸಲು ಆರಂಭವಾಗಿತ್ತು.

ಜೋರಾದ ಸದ್ದು ಹಾಗೂ ಬೆಂಕಿ ಹೊತ್ತುಕೊಂಡ ಬಗ್ಗೆ ಗೊತ್ತಾಗುತ್ತಿದ್ದಂತೆ ಮಾಲ್‌ನಲ್ಲಿದ್ದ ಶೆಕ್ಯೂರಿಟಿ ಗಾರ್ಡ್ ಹೊರಗೆ ಓಡಿ ಬಂದಿದ್ದ. ಅನೇಕರಿಗೆ ಮಾಹಿತಿ ನೀಡಿದ್ದ. ಕೂಡಲೇ ಸ್ಥಳೀಯರು ಮಾಲ್‌ನಲ್ಲಿದ್ದ ಶೆಕ್ಯೂರಿಟಿ ಸೋಮಶೇಖರ್ ಮತ್ತು ಆತನ ಪತ್ನಿ ವೀರುಬಾಯಿಯನ್ನು ಸುರಕ್ಷಿತವಾಗಿ ಹೊರಗೆ ಕರೆದುಕೊಂಡು ಬಂದಿದ್ದರು. ಅಗ್ನಿಶಾಮಕ ಸಿಬ್ಬಂದಿ ಕೂಡ ಆಗಮಿಸಿದ್ದರು. 12 ಗಂಟೆಗೆ ಹೊತ್ತಿಕೊಂಡ ಬೆಂಕಿಯನ್ನು ಸರಿಸುಮಾರು ನಸುಕಿನ ಜಾವ 4 ಗಂಟೆವರಗೆ ಕಾರ್ಯಾಚರಣೆ ನಡೆಸಿ ನಂದಿಸಲಾಗಿದೆ.

ಮಾಲ್ ಸುತ್ತಮುತ್ತ ಅನೇಕ ವಸತಿ ಕಟ್ಟಡಗಳಿದ್ದು ಅಲ್ಲಿಗೂ ಕೂಡ ಬೆಂಕಿ ಆವರಿಸಲು ಆರಂಭವಾಗಿತ್ತು. ಹೀಗಾಗಿ ಮನೆಯಲ್ಲಿದ್ದವರು ನಿದ್ರೆ ಮಂಪರಿನಿಂದ ಓಡೋಡಿ ಹೊರಗೆ ಬಂದಿದ್ದರು. ಆದರೆ ಬೆಂಕಿ ಸುತ್ತಮುತ್ತಲಿನ ಕಟ್ಟಡಕ್ಕೆ ವ್ಯಾಪಿಸುವ ಮುನ್ನವೇ ಅಗ್ನಿಶಾಮಕ ಸಿಬ್ಬಂದಿ ಜಾಗೃತಿ ವಹಿಸಿ ಬೆಂಕಿ ನಂದಿಸಿದ್ದು, ದೊಡ್ಡಮಟ್ಟದ ಅವಘಡವೊಂದು ತಪ್ಪಿದಂತಾಗಿದೆ.

**ತಪ್ಪಿದ ಭಾರೀ ಅನಾಹುತ**:ಇನ್ನು ಈ ಮಾಲ್ ನಲ್ಲಿ ಸರಿಸುಮಾರು 250ಕ್ಕೂ ಹೆಚ್ಚು ಬಟ್ಟೆ, ಪಾದರಕ್ಷೆ ಮತ್ತು ಕಾಸ್ಮೆಟಿಕ್ ಅಂಗಡಿಗಳಿವೆ. ಮೊದಲನೇ ಮತ್ತು ಎರಡನೇ ಮಹಡಿಯಲ್ಲಿಯೇ ಹೆಚ್ಚು ಅಂಗಡಿಗಳಿವೆ. ಒಂದು ವೇಳೆ ಅಲ್ಲಿಗೂ ಬೆಂಕಿ ಆವರಿಸಿದ್ದರೆ ದೊಡ್ಡ ಮಟ್ಟದ ಅಪಾಯವಾಗುವ ಸಾಧ್ಯತೆಯಿತ್ತು. ಈ ಕಟ್ಟಡದಲ್ಲಿ ಅಗ್ನಿ ಅವಘಡವಾಗ್ತಿರೋದು ಇದೇ ಮೊದಲೇನಲ್ಲವಂತೆ. ಈ ಹಿಂದೆ ಕೂಡ ಎರಡು ಬಾರಿ ಅಗ್ನಿ ಅವಘಡವಾಗಿತ್ತಂತೆ. ಹೀಗಿದ್ದರೂ ಮಾಲ್ ಮಾಲೀಕರು ಅಗ್ನಿ ಸುರಕ್ಷತಾ ಕ್ರಮಗಳನ್ನು ಕೈಗೊಂಡಿಲ್ಲ. ಜೊತೆಗೆ ನಾಲ್ಕನೇ ಮಹಡಿಯಲ್ಲಿ ಬೇಕಾಬಿಟ್ಟಿ ವಸ್ತುಗಳನ್ನು ಸಂಗ್ರಹಿಸಿದ್ದರಿಂದ ಹೊತ್ತಿಯುರಿದಿದೆ.

ಅಗ್ನಿಶಾಮಕ ಸಿಬ್ಬಂದಿ ಮತ್ತು ಸ್ಥಳೀಯರ ಸಮಯ ಪ್ರಜ್ಞೆಯಿಂದ ದೊಡ್ಡ ಮಟ್ಟದ ಅಗ್ನಿ ಅವಘಡ ತಪ್ಪಿದೆ. ಆದರೆ ಇದೇ ಮಾಲ್‌ನಲ್ಲಿ ವ್ಯಾಪಾರ ನಡೆಸುತ್ತಿರುವ ಅನೇಕ ಕುಟುಂಬಗಳು ಅಗ್ನಿ ಅವಘಡದಿಂದ ಕಂಗಾಲಾಗಿದ್ದು, ಮಾಲ್ ರಿಪೇರಿ ಆಗೋವರಗೆ ಉದ್ಯೋಗವಿಲ್ಲದೇ ಪರದಾಡು ವಂತಾಗಿದೆ.

## ಸ್ವಾಮಿ ವಿವೇಕಾನಂದ ರಾಷ್ಟ್ರೀಯ ಪ್ರೇರಣಾ ಪ್ರಶಸ್ತಿ ವಿಜೇತ ಆನಂದ್ ಸಿ. ತಿರುಮಲರಿಗೆ ಸನ್ಮಾನ



**ಬೆಂಗಳೂರು:** ಸಮಾಜಮುಖಿ ಕಾರ್ಯಕ್ರಮ ಗಳಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆಯನ್ನು ಗುರುತಿಸಿ ಸ್ವಾಮಿ ವಿವೇಕಾನಂದ ರಾಷ್ಟ್ರೀಯ ಪ್ರೇರಣಾ ಪ್ರಶಸ್ತಿ ಪಡೆದಿರುವ ಬೆಂಗಳೂರಿನ ಆನಂದ್ ಸಿ. ತಿರುಮಲರನ್ನು ಕರ್ನಾಟಕ ರಾಜ್ಯ ಪುರುಷ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ಪ್ರಧಾನ ಕಾರ್ಯದರ್ಶಿ ರಂಗನಾಥ್ ಎಲ್. ಪಾತ್ರೋಟಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿಯ ಯುವ ಮುಖಂಡ ಗಗನ್ ಕುಮಾರ್ ಅವರ ನೇತೃತ್ವದ ತಂಡದವರು ಇಂದು ಬೆಂಗಳೂರಿನ ಕಚೇರಿಯಲ್ಲಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗಗನ್ ಕುಮಾರ್ ಅವರು, "ಸಮಾಜಮುಖಿ ಕಾರ್ಯಗಳಲ್ಲಿ ಆನಂದ್ ಸಿ. ತಿರುಮಲರು ಸಾಧಿಸಿರುವ ಸಾಧನೆ ನಮಗೆ ಹೆಮ್ಮೆ ತಂದಿದೆ. ಅವರ ಸೇವೆಯಿಂದ ನಮ್ಮ ತಾಲೂಕಿನ ಅನೇಕ ಯುವಕರಿಗೆ ಪ್ರೇರಣೆ ದೊರೆತಿದ್ದು, ಯುವಜನರಿಗೆ ಇನ್ನಷ್ಟು ಸ್ಫೂರ್ತಿ ಸಿಕ್ಕಂತಾಗಿದೆ" ಎಂದು ಹೇಳಿದರು.

ಕರ್ನಾಟಕ ರಾಜ್ಯ ಪುರುಷ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ಪ್ರಧಾನ ಕಾರ್ಯದರ್ಶಿ ರಂಗನಾಥ್ ಎಲ್. ಪಾತ್ರೋಟಿ ಮಾತನಾಡಿ ಯುವಜನರ ಶಕ್ತಿ ಮತ್ತು ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಸಿಕೊಳ್ಳಲು ಸರ್ಕಾರದಿಂದ ಇನ್ನಷ್ಟು ಅವಕಾಶಗಳು ದೊರೆಯಬೇಕು. ಇಂತಹ ಸಾಧಕರು ಯುವಕರಿಗೆ ದಾರಿ ತೋರಿಸುವ ಶಕ್ತಿಯಾಗಿದ್ದಾರೆ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಆನಂದ್ ಸಿ. ತಿರುಮಲರು, ಈ ಗೌರವಕ್ಕೆ ಕಾರಣರಾದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಯುವಕರನ್ನು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಸಂಕಲ್ಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ತಂಡದ ಯುವ ಅಧ್ಯಕ್ಷ ವಿನಯ್ ಕುಮಾರ್, ಗಗನ್, ಅಂಜಿ, ರಂಗನಾಥ್ ಎಲ್. ಪಾತ್ರೋಟಿ ನಾಗರಾಜ್, ಕುಮಾರ್ ಸೇರಿದಂತೆ ತಂಡದ ಸದಸ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ವಿಜಯಪುರ ಗ್ರಾಮೀಣ ಪೊಲೀಸರ ಕಾರ್ಯಾಚರಣೆ, 14 ಮಂದಿ ಅರೆಸ್ಟ್







**ವಿಜಯಪುರ:** ಭರ್ಜರಿ ಕಾರ್ಯಾಚರಣೆ ನಡೆಸುವ ಮೂಲಕ ವಿಜಯಪುರ ಗ್ರಾಮೀಣ ಪೊಲೀಸರು ಅಂತರ್ ಜಿಲ್ಲೆ ಮತ್ತು ಅಂತಾರಾಜ್ಯ ಕಳ್ಳರು, ಖದೀಮರು ಸೇರಿ ಒಟ್ಟು 14 ಮಂದಿಯನ್ನು ಹೆಡೆಮುರಿ ಕಟ್ಟಿದ್ದಾರೆ. ಆರೋಪಿಗಳಿಂದ ನಗದು, ಚಿನ್ನಾಭರಣ ಮತ್ತು ವಾಹನಗಳು ಸೇರಿ 1.17 ಕೋಟಿ ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದ್ದು, ಖಾಕಿ ಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಜಪ್ತಿ ಮಾಡಿದ ಹಣ ಮತ್ತು ಚಿನ್ನವನ್ನು ವಾರಸುದಾರರಿಗೆ ಹಸ್ತಾಂತರಿಸಲಾಗಿದೆ.

**ಹಲವು ಪ್ರಕರಣ ಭೇದಿಸಿದ ಖಾಕಿ**:2025ರ ಮೇ 30ರಂದು ಬಸ್‌ನಲ್ಲಿ ಪ್ರಯಾಣ ಮಾಡುತ್ತಿದ್ದ ಮಹಿಳೆಯ ಬ್ಯಾಗ್‌ನಲ್ಲಿದ್ದ 65 ಗ್ರಾಂ ಚಿನ್ನಾಭರಣ ಕದ್ದು ಪರಾರಿಯಾಗಿದ್ದ ಗ್ಯಾಂಗ್‌ನ ಪತ್ತೆ ಮಾಡಿರುವ ಪೊಲೀಸರು, ಪ್ರಕರಣ ಸಂಬಂಧ ಕಲಬುರಗಿಯ ಪ್ರಶಾಂತ, ಆತನ ಪತ್ನಿ ಮಂಜುಳಾ, ಮಹಾರಾಷ್ಟ್ರದ ಅಂಕುಶ ಜಾಧವ್, ಗೋವರ್ಧನ ಪವಾರ, ಶಿವಮೊಗ್ಗ ಜಿಲ್ಲೆ ಭದ್ರಾವತಿಯ ಶಿವು ಹಾಗೂ ಆತನ ಪತ್ನಿ ರಜನಿಯನ್ನು ಬಂಧಿಸಿ ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ. ಇನ್ನು ನಕಲಿ ಚಿನ್ನದ ನಾಣ್ಯಗಳನ್ನು ಅಸಲಿ ಎಂದು ನಂಬಿಸಿ ಮಹಾರಾಷ್ಟ್ರದ ಲಾತೂರ್ ಮೂಲದ ರಾಜಕುಮಾರ ಕುಂಡರಗಿ ಎಂಬುವವರಿಗೆ ಮಾರಾಟ ಮಾಡಿದ ಆರೋಪದ ಮೇಲೆ ವಿಜಯನಗರ ಜಿಲ್ಲೆಯ ಮೂಲದ ಹಣಮಂತ ಕೊರಚರ, ರಾಜಾ ಕಾವಾಡಿ, ಹರೀಶ ಕೊರಚರ ಹಾಗೂ ಚಿರಂಜಿವಿ ಕೊರಚರ ಎಂಬ ನಾಲ್ವರನ್ನು ಬಂಧಿಸಿ ನಗದನ್ನು ವಶಕ್ಕೆ ಪಡೆದಿದ್ದಾರೆ. ವಿವಿಧ ಬೈಕ್ ಕಳವು ಪ್ರಕರಣಗಳನ್ನೂ ಭೇದಿಸಿದ್ದು, ವಿಜಯಪುರ ಜಿಲ್ಲೆಯ ಬಾಬು ಜಮಖಂಡಿ, ಸಿದ್ರಾಮ್ ಅರಕೇರಿ, ಮಂಜುನಾಥ ಉಕ್ಕಲಿ, ಆಕಾಶ ಮಠಪತಿ ಎಂಬುವರನ್ನು ಬಂಧಿಸಿ 20 ಬೈಕ್ ಗಳು ಮತ್ತು ಎರಡು ಕಾರ್‌ಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ಮಾಹಿತಿ ನೀಡಿದ್ದಾರೆ.

**ಪೊಲೀಸರಿಗೆ ಸನ್ಮಾನ:**ಜಿಲ್ಲೆಯ ಖದೀಮರ ಜೊತೆಗೆ ಅನ್ಯ ಜಿಲ್ಲೆ ಹಾಗೂ ಅಂತಾರಾಜ್ಯದ ಆರೋಪಿಗಳ ಕೈಗೂ ಕೋಳ ಹಾಕಿರುವ ಖಾಕಿ, ಮೋಸ ಹೋದವರಿಗೆ ಮತ್ತು ಕಳ್ಳತನಕ್ಕೆ ಒಳಗಾದವರಿಗೆ ನ್ಯಾಯ ಒದಗಿಸಿದೆ. ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ ವಿಜಯಪುರ ಗ್ರಾಮೀಣ ಡಿವೈಎಸ್ಪಿ ಟಿ. ಎಸ್. ಸುಲ್ಫಿ, ಇನ್‌ಸ್ಪೆಕ್ಟರ್ ಗಳಾದ ರಾಯಗೊಂಡ ಜಾನಾರ, ರಮೇಶ ಆವಜಿ, ಸಬ್ ಇನ್ಸಪೆಕ್ಟರ್‌ಗಳು ಹಾಗೂ ಪೊಲೀಸ್ ಕಾನ್‌ಸ್ಟೇಬಲ್ಸ್ ಗಳಿಗೆ ಪ್ರಮಾಣಪತ್ರ ನೀಡಿ ಎಸ್ಪಿ ಲಕ್ಷ್ಮಣ ನಿಂಬರಗಿ ಮತ್ತು ಎಎಸ್ಪಿ ರಾಮನಗೌಡ ಹಟ್ಟಿ ಸನ್ಮಾನಿಸಿದ್ದಾರೆ.

## ಪ್ರಿಯಕರನೊಂದಿಗೆ ಸೇರಿ ಗಂಡನನ್ನೇ ಉಸಿರುಗಟ್ಟಿಸಿ ಕೊಂದ ಪತಿ



**ಗುಂಟೂರು:** ಮಹಿಳೆಯೊಬ್ಬರು ತನ್ನ ಪತಿಯನ್ನು ಉಸಿರುಗಟ್ಟಿಸಿ ಕೊಲೆ) ಮಾಡಿರುವ ಘಟನೆ ಆಂಧ್ರಪ್ರದೇಶದ ಗುಂಟೂರಿನಲ್ಲಿ ನಡೆದಿದೆ. ಮಹಿಳೆಗೆ ಬೇರೊಬ್ಬ ಪುರುಷನ ಜತೆ ಅಕ್ರಮ ಸಂಬಂಧವಿತ್ತು, ತಮ್ಮ ಸಂಬಂಧಕ್ಕೆ ಅಡ್ಡವಾಗಿದ್ದ ಪತಿಯನ್ನು ಕೊಲ್ಲಲು ಇಬ್ಬರೂ ಸೇರಿ ಸಂಚು ಹೂಡಿದ್ದರು. ಪತಿಗಾಗಿ ಬಿರಿಯಾನಿ ಸಿದ್ಧಪಡಿಸಿದ್ದಳು, ಅದರೊಳಗೆ ನಿದ್ರೆ ಮಾತ್ರೆಯ ಪುಡಿಯನ್ನು ಬೆರೆಸಿದ್ದಳು, ಪತಿ ನಿದ್ರೆಗೆ ಜಾರುತ್ತಿದ್ದಂತೆ ಪ್ರಿಯಕರನನ್ನು ಮನೆಗೆ ಕರೆದಿದ್ದಾಳೆ.

ನಂತರ ಇಬ್ಬರೂ ಸೇರ ಮಲಗಿದ್ದ ವ್ಯಕ್ತಿಯ ಕತ್ತು ಹಿಸುಕಿ ಕೊಲೆ ಮಾಡಿದ್ದಾರೆ. ಗುಂಟೂರಿನ ಚಿಲುವೂರು ಗ್ರಾಮದಲ್ಲಿ ಈ ವಿಚಿತ್ರ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರಂಭದಲ್ಲಿ ಸಹಜ ಸಾವು ಎಂದು ಬಿಂಬಿಸಿದ್ದರು, ವಿಧಿವಿಜ್ಞಾನ ಪರೀಕ್ಷೆಯ ನಂತರ ಆ ವ್ಯಕ್ತಿ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ ಎಂಬುದು ತಿಳಿದುಬಂದಿತ್ತು. ಇಬ್ಬರನ್ನು ಬಂಧಿಸಲಾಗಿದೆ.

ಮೃತ ವ್ಯಕ್ತಿ ಹೆಸರು ಲೋಕಂ ಶಿವನಾಗರಾಜು, ಪತ್ನಿ ಲಕ್ಷ್ಮಿ ಮಾಧುರಿ ಮತ್ತಾಕೆಯ ಪ್ರಿಯಕರ ಗೋಪಿ ಇಬ್ಬರೂ ಸೇರಿ ಕೊಲೆ ಮಾಡಿದ್ದಾರೆ. ಅಪರಾಧ ನಡೆಯುವ ಮೊದಲು ಮಾಧುರಿ ಗೋಪಿ ಜೊತೆ ವಿವಾಹೇತರ ಸಂಬಂಧ ಹೊಂಂದಿದ್ದಳು. ಶಿವನಾಗರಾಜು ಊಟ ಮಾಡಿ ಗಾಢ ನಿದ್ರೆಗೆ ಜಾರಿದ ನಂತರ ಲಕ್ಷ್ಮಿ ಗೋಪಿಯನ್ನು ಮನೆಗೆ ಕರೆಸಿದ್ದಳು.

ಇಬ್ಬರೂ ಶಿವನಾಗರಾಜು ಅವರ ಮುಖದ ಮೇಲೆ ದಿಂಬನ್ನು ಇಟ್ಟು ಸಾಯು ವವರೆಗೂ ಉಸಿರು ಗಟ್ಟಿಸಿದ್ದರು. ಮಾಧುರಿ ತನ್ನ ಪತಿ ಹೃದಯಾಘಾತದಿಂದ ಸಾವನ್ನ ಪ್ಪಿದ್ದಾರೆ ಎಂಬ ಹೇಳಿಕೆಯನ್ನು ನೀಡಿದ್ದರು. ಬೆಳಗಿನ ಜಾವ ಅಕ್ಕಪಕ್ಕದ ಮನೆಯವರ ಬಳಿ ಹೋಗಿ ಪತಿ ಸಾವಿನ ಕುರಿತು ಮಾಹಿತಿ ನೀಡಿದ್ದಳು.

ಶವವನ್ನು ಪರೀಕ್ಷಿಸಿದಾಗ ರಕ್ತದ ಕಲೆಗಳ ಜೊತೆಗೆ ಗಾಯಗಳನ್ನು ಗಮನಿಸಿದಾಗ ಅನುಮಾನ ಹುಟ್ಟಿಕೊಂಡಿತ್ತು. ಸ್ಥಳೀಯ ಪೊಲೀಸರಿಗೆ ದೂರು ಸಲ್ಲಿಸಿದರು, ಅಧಿಕೃತ ತನಿಖೆಗೆ ಮುಂದಾದರು. ಮರಣೋತ್ತರ ಪರೀಕ್ಷೆಯ ವೇಳೆ ಎದೆಯಲ್ಲೂ ಗಾಯವಾಗಿದ್ದನ್ನು ಕಂಡರು. ಸಹಜ ಸಾವಲ್ಲ ಎನ್ನುವ ನಿರ್ಧಾರಕ್ಕೆ ಬರಲಾಯಿತು.

ಬಂ ಧಿ ಸ ಲಾ ಯಿ ತು . ಮಾಧುರಿಯ ಮೊಬೈಲ್ ಫೋನ್‌ನ ವಿಧಿವಿಜ್ಞಾನ ಪರಿಶೀಲನೆಯ ಸಮಯದಲ್ಲಿ ತನಿಖೆಯಿಂದ ಪ್ರಮುಖ ಮಾಹಿತಿ ಬಹಿರಂಗವಾಯಿತು. ಮಾಧುರಿ ತನ್ನ ಪತಿಯ ದೇಹದ ಬಳಿ ಕುಳಿತುಕೊಂಡು ಇಡೀ ರಾತ್ರಿ ಅಶ್ಲೀಲ ವೀಡಿಯೊಗಳನ್ನು ವೀಕ್ಷಿಸುತ್ತಿದ್ದಳು, ಪ್ರಿಯಕರನ ಜತೆ ಮಾಡಬಾರದ್ದನ್ನು ಮಾಡಿದ್ದಳು ಎಂಬುದು ತಿಳಿದುಬಂದಿದೆ. ವಿಚಾರಣೆಯ ಸಮಯದಲ್ಲಿ, ಮಾಧುರಿ ಸಂಪೂರ್ಣ ತಪ್ಪೊಪ್ಪಿಗೆಯನ್ನು ನೀಡಿದ್ದು, ಗೋಪಿಯೊಂದಿಗೆ ಸೇರಿ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ.

## ಚಿಕ್ಕ ಮಕ್ಕಳೆಂದೂ ಲೆಕ್ಕಿಸದೆ ಬಾಸುಂಡೆ ಬರುವಂತೆ ಥಳಿಸಿದ ದುರುಳರು!



**ಬೆಂಗಳೂರು ಗ್ರಾಮಾಂತರ**:ಜಿಲ್ಲೆಯ ದೊಡ್ಡ ಬಳ್ಳಾಪುರ ನಗರದಲ್ಲಿ ಚಿಕ್ಕ ಮಕ್ಕಳ ಮೇಲೆ ಅಮಾನ ವೀಯ ಹಲ್ಲೆ ನಡೆಸಿರುವ ಘಟನೆ ಬೆಳಕಿಗೆ ಬಂದಿದೆ. ದೊಡ್ಡಬಳ್ಳಾಪುರದ ಮುತ್ಯಾ ಲಮ್ಮ ದೇವಸ್ಥಾನದ ಬಳಿ 3 ಮತ್ತು 7 ವರ್ಷದ ಇಬ್ಬರು ಗಂಡು ಮಕ್ಕಳನ್ನು ದುರುಳರು ನಿರ್ದಯವಾಗಿ ಹಲ್ಲೆ ಮಾಡಿದ್ದು, ಮಕ್ಕಳನ್ನ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

**ಮಗುವಿನ ಕೈ ಮುರಿದಿರುವ ನಿರ್ದಯಿಗಳು**:ಹಲ್ಲೆಯಿಂದ ಮಕ್ಕಳ ಮೈ, ಕೈ ಮತ್ತು ಕಾಲುಗಳ ಮೇಲೆ ತೀವ್ರ ಬಾಸುಂಡೆಗಳು ಉಂಟಾಗಿದ್ದು, ಒಂದು ಮಗುವಿನ ಕೈ ಮುರಿದಿದೆ ಎಂದು ಹೇಳಲಾಗಿದೆ. ಚಿಕ್ಕ ಮಕ್ಕಳು ಎಂಬುದನ್ನೂ ಲೆಕ್ಕಿಸದೇ ಹಲ್ಲೆ ನಡೆಸಿರುವ ಈ ವಿಕೃತ ಕೃತ್ಯವು ಮಾನವೀಯತೆಯನ್ನೇ ಪ್ರಶ್ನಿಸು ವಂತಾಗಿದೆ. ಗಾಯಗೊಂಡ ಮಕ್ಕಳ ಸ್ಥಿತಿಯನ್ನು ಕಂಡ ಸ್ಥಳೀಯರು ಮಕ್ಕಳ ಸಹಾಯವಾಣಿ (ಚೈಲ್ಡ್ ಹೆಲ್ಪ್‌ಲೈನ್) ಗೆ ದೂರು ನೀಡಿದ್ದು, ದೂರಿನನ್ವಯ ಸ್ಥಳಕ್ಕೆ ಆಗಮಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಹಲ್ಲೆ ಪ್ರಕರಣ ಬೆಳಕಿಗೆ ಬಂದಿದೆ. ತಕ್ಷಣವೇ ಮಕ್ಕಳನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿ, ಚಿಕಿತ್ಸೆ ಕೊಡಿಸಲಾಗಿದೆ.

**ತಾಯಿಯಿಲ್ಲದ ಸಮಯದಲ್ಲಿ ಘಟನೆ:**ಮಕ್ಕಳ ತಾಯಿ ಗಾರ್ಮೆಂಟ್ಸ್ ಕೆಲಸಕ್ಕೆ ತೆರಳಿದ್ದ ವೇಳೆ ಅಪರಿಚಿತರು ಮಕ್ಕಳ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ. ಘಟನೆಯ ನಂತರ ಹೆದರಿಕೊಂಡಿರುವ ಮಕ್ಕಳು, ಹಲ್ಲೆಯ ಬಗ್ಗೆ ಸ್ಪಷ್ಟವಾಗಿ ಏನೂ ಹೇಳಲು ಸಾಧ್ಯವಾಗದೆ ಆತಂಕದಲ್ಲಿದ್ದಾರೆ ಎನ್ನಲಾಗಿದೆ. ಈ ಹಿನ್ನೆಲೆ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡಿದ್ದು, ಹಲ್ಲೆ ನಡೆಸಿದ ದುರುಳರ ಪತ್ತೆಗೆ ತನಿಖೆ ಮುಂದುವರಿದಿದೆ. ಆರೋಪಿಗಳನ್ನು ಶೀಘ್ರ ಬಂಧಿಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಕಾಂಗ್ರೆಸ್ ನಾಯಕನಿಗೆ ಶಾಕ್ ಮೇಲೆ ಶಾಕ್, ಕೋರ್ಟ್ ಬಳಿಕ ಪಕ್ಷದಿಂದ ಶಾಸ್ತಿ



**ಬೆಂಗಳೂರು:**ಶಿಡ್ಲಘಟ್ಟ ನಗರಸಭೆ ಪಾರಾಯುಕ್ತೆ ಅಮೃತಾ ಅವರಿಗೆ ಅವಾಚ್ಯ ಶಬ್ಧಗಳಿಂದ ನಿಂದಿಸಿ ಬೆದರಿಕೆ ಹಾಕಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ರಾಜೀವ್ ಗೌಡನನ್ನು (Rajeev Gowda) ಕಾಂಗ್ರೆಸ್ (Congress) ಪಕ್ಷದಿಂದ ಅಮಾನತು ಮಾಡಿದೆ. ಇಂದು (ಜನವರಿ 23) ನಡೆದ ಕೆಪಿಸಿಸಿ ಶಿಸ್ತು ಪಾಲನಾ ಸಮಿತಿಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ರಾಜೀವ್ ಗೌಡ ಶಿಡ್ಲಘಟ್ಟ ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧ ಬಂದಿರುವ ಪ್ರಕರಣವನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಪ್ರಕರಣದ ಗಂಭೀರತೆ ಮನವರಿಕೆಯಾದ ಹಿನ್ನಲೆಯಲ್ಲಿ ಕೆಪಿಸಿಸಿ ಶಿಸ್ತುಪಾಲನಾ ಸಮಿತಿಯ ಶಿಫಾರಸ್ಸಿನ ಮೇರೆಗೆ ರಾಜೀವ್ ಗೌಡ ಅವರನ್ನು ಪಕ್ಷದಿಂದ ಸಸ್ಪೆಂಡ್ ಮಾಡಲಾಗಿದೆ.

**ಜಿಲ್ಲಾ ಉಸ್ತುವಾರಿ ಸಚಿವ ಖಡಕ್ ಮಾತು**:ಈ ಬಗ್ಗೆ ಚಿಕ್ಕಬಳ್ಳಾಪುರ ಉಸ್ತುವಾರಿ ಸಚಿವ ಎಂ.ಸಿ ಸುಧಾಕರ್ ಮಾತನಾಡಿದ್ದು, ಜನವರಿ 12ರಂದು ಸಂಜೆ ನಡೆದ ದೂರವಾಣಿ ಸಂಭಾಷಣೆಯಿಂದ ಅಧಿಕಾರಿಗಳಲ್ಲಿ ಆತಂಕ ಉಂಟಾಗಿತ್ತು. ಅವರು ದೂರು ಕೊಟ್ಟ ತಕ್ಷಣ ಕ್ರಮಕ್ಕೆ ಸರ್ಕಾರ ಮುಂದಾಗಿದೆ. ಅವರ ಮೇಲೆ ದೂರು ಕೂಡ ದಾಖಲಾಗಿದೆ. ಈಗ ಉತ್ತರ ಕೊಡದ ಕಾರಣ ಪಕ್ಷದಿಂದ ಅಮಾನತು ಮಾಡಲಾಗಿದೆ. ಅಧಿಕಾರಿಗಳ ಗೌರವ ಉಳಿಸುವ ಕಾರ್ಯ ನಾವು ಮಾಡಿದ್ದೇವೆ. ಅವರು ತಲೆ ಮರೆಸಿಕೊಂಡಿದ್ದಾರೆ. ಅವರನ್ನು ಬಂಧಿಸುವ ಕೆಲಸ ಆಗುತ್ತದೆ. ಮುನಿಯಪ್ಪ ಅವರಿಗೆ ಆತ್ಮೀಯತೆ ಇರಬಹುದು. ಆದ್ರೆ ಆಡಿಯೋ ಕೇಳಿದ್ರೆ ನಾಗರಿಕ ಸಮಾಜ ಮೆಚ್ಚುವಂತದಲ್ಲ. ಆತ್ಮೀಯತೆ ಇದೆ ಎಂದರೆ ಅವರ ಪರವಾಗಿ ಮುನಿಯಪ್ಪ ಇದಾರೆ ಅಂತಲ್ಲ. ಸಿಎಂ, ಡಿಸಿಎಂ, ಗೃಹ ಸಚಿವರು ಸೂಚನೆ ಕೊಟ್ಟಿದ್ದಾರೆ. ಕೂಡಲೇ ಅವರನ್ನು ಬಂಧಿಸುವ ಕೆಲಸ ಆಗುತ್ತದೆ ಎಂದು ಸ್ಪಷ್ಟಪಡಿಸಿದರು.

ಬ್ಯಾನರ್ ವಿಚಾರಕ್ಕೆ ಮಹಿಳಾ ಅಧಿಕಾರಿಗೆ ಕರೆ ಮಾಡಿ ಬಾಯಿಗೆ ಬಂದಂತೆ ಬೈದು ಧಮ್ಕಿ ಹಾಕಿದ್ದು, ಈ ಪ್ರಕರಣ ರಾಜಕೀಯ ಸ್ವರೂಪ ಪಡೆದುಕೊಂಡಿದೆ. ಈ ಪ್ರಕರಣ ಇಟ್ಟುಕೊಂಡು ವಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಅಸ್ತ್ರವನ್ನಾಗಿ ಮಾಡಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಕಾಂಗ್ರೆಸ್ ಪಕ್ಷ ಮತ್ತು ಸರ್ಕಾರ ವಿರುದ್ಧ ಟೀಕೆಗಳನ್ನು ಮಾಡುತ್ತಿವೆ. ಹೀಗಾಗಿ ಪಕ್ಷಕ್ಕೆ ಮಜುಗರವಾಗಿರುವುದಿರಂದ ಕಾಂಗ್ರೆಸ್ ಈ ಕಟ್ಟುನಿಟ್ಟಿನ ಕ್ರಮಕೈಗೊಂಡಿದೆ.

**ಅಮಾನತಿಗೆ ಶಿಫಾರಸ್ಸು ಮಾಡಿದ್ದ ಕಾರ್ಯಾಧ್ಯಕ್ಷ:**ಪ್ರಕರಣ ನಡೆದ ಸಂಬಂಧ ಆರೋಪಿ ರಾಜೀವ್‌ಗೌಡಗೆ ಕೆಪಿಸಿಸಿ ಶೋಕಾಸ್ ನೋಟಿಸ್ ಜಾರಿ ಮಾಡಿತ್ತು. ಆದ್ರೆ, ನೋಟಿಸ್‌ಗೆ ಯಾವುದೇ ಉತ್ತರ, ಪ್ರತಿಕ್ರಿಯೆ ನೀಡಿರಲಿಲ್ಲ. ಇದರ ಬೆನ್ನಲ್ಲೇ ರಾಜೀವ್ ಗೌಡನನ್ನು ಪಕ್ಷದಿಂದ ಅಮಾನತು ಮಾಡುವಂತೆ ಕೆಪಿಸಿಸಿ ಕಾರ್ಯಾಧ್ಯಕ್ಷ ಚಂದ್ರಶೇಖರ್ ಅವರು ನಿನ್ನೆ (ಜನವರಿ 22) ಕಾಂಗ್ರೆಸ್ ಶಿಸ್ತು ಸಮಿತಿ ಅಧ್ಯಕ್ಷರಿಗೆ ಶಿಫಾರಸ್ಸು ಮಾಡಿದ್ದರು.

ರಾಜೀವ್ ಗೌಡ ಅವರ ನಡೆ ಮಾಧ್ಯಮಗಳಲ್ಲಿ ಪ್ರಚಾರಗೊಂಡು ಕಾಂಗ್ರೆಸ್ ಪಕ್ಷಕ್ಕೆ ಮತ್ತು ರಾಜ್ಯ ಮಟ್ಟದ ನಾಯಕರಿಗೆ ತೀವ್ರ ಮುಜುಗರ ಉಂಟುಮಾಡಿದೆ. ಈ ಹಿನ್ನೆಲೆಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಜಿ.ಸಿ. ಚಂದ್ರಶೇಖರ್ ಅವರು ಶಿಸ್ತು ಸಮಿತಿಗೆ ಪತ್ರ ಬರೆದಿದ್ದರು. 'ಪಕ್ಷದ ಘನತೆಗೆ ಧಕ್ಕೆ ತಂದಿರುವ ರಾಜೀವ್ ಗೌಡ ಅವರನ್ನು ತಕ್ಷಣವೇ ಪಕ್ಷದಿಂದ ಅಮಾನತುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು' ಎಂದು ಪತ್ರ ಬರೆದಿದ್ದರು. ಇದರ ಬೆನ್ನಲ್ಲೇ ಇಂದಿನ ಸಭೆಯಲ್ಲಿ ರಾಜೀವ್ ಗೌಡನನ್ನು ಪಕ್ಷದಿಂದ ಸಸ್ಪೆಂಡ್ ಮಾಡುವ ತೀರ್ಮಾನ ಕೈಗೊಳ್ಳಲಾಗಿದೆ.

**ಇದುವರೆಗೂ ರಾಜೀವ್ ಗೌಡನ ಬಂಧನವಾಗಿಲ್ಲ:**ಬ್ಯಾನರ್ ತೆರವು ಮಾಡಿರುವ ಸಂಬಂಧ ರಾಜೀವ್ ಗೌಡ, ಶಿಡ್ಲಘಟ್ಟ ಮಹಿಳಾ ಪೌರಾಯುಕ್ತೆ ಅಮೃತಾ ಅವರಿಗೆ ಕರೆ ಮಾಡಿ ಅವಾಚ್ಯ ಶಬ್ಧಗಳಿಂದ ನಿಂದಿಸಿ ಬೆದರಿಕೆ ಹಾಕಿದ್ದರು. ಇದರ ಬೆನ್ನಲ್ಲೇ ಅಮೃತಾ ಅವರು ರಾಜೀವ್ ಗೌಡ ವಿರುದ್ಧ ದೂರು ದಾಖಲಿಸಿದ್ದು, ಈ ದೂರಿನ ಮೇರೆಗೆ ಪೊಲೀಸರು ಸಹ ಎಫ್‌ಐಆರ್ ದಾಖಲಿಸಿದ್ದಾರೆ. ಆದ್ರೆ, ಇದುವರೆಗೂ ರಾಜೀವ್ ಗೌಡನನ್ನು ಬಂಧಿಸಲು ಆಗಿಲ್ಲ. ಇನ್ನು ರಾಜೀವ್ ಗೌಡ ಎಲ್ಲಿದ್ದಾನೆ ಎನ್ನುವ ಸುಳಿವು ಸಹ ಸಿಕ್ಕಿಲ್ಲ. ಇನ್ನೊಂದೆಡೆ ಸಚಿವ ಸೂಚನೆ ಹಿನ್ನೆಲೆಯಲ್ಲಿ ಪೊಲೀಸರು ಬೇಕಂತಲೇ ರಾಜೀವ್ ಗೌಡನನ್ನು ಬಂಧಿಸುತ್ತಿಲ್ಲ ಎನ್ನುವ ಆರೋಪ ಕೇಳಿಬಂದಿದೆ.

**ಹೈಕೋರ್ಟ್‌ನಲ್ಲೂ ಅರ್ಜಿ ವಜಾ**:ಇನ್ನು ತಮ್ಮ ವಿರುದ್ಧದ ಪ್ರಕರಣ ರದ್ದುಕೋರಿ ಅಜ್ಞಾತ ಸ್ಥಳದಿಂದಲೇ ರಾಜೀವ್ ಗೌಡ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್ ಸಹ ರಾಜೀವ್ ಗೌಡನನ್ನು ತರಾಟೆಗೆ ತೆಗೆದುಕೊಂಡು ಅರ್ಜಿ ವಜಾ ಮಾಡಿತ್ತು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹೆಣ್ಣು ಮಕ್ಕಳು ಸಮಾಜದ ಮುಖ್ಯವಾಹಿನಿಗೆ ಬರಬೇಕು:ನ್ಯಾ.ಭೀಮಸೇನ ಬಾಗಡಿ



**ಬೆಂಗಳೂರು ಗ್ರಾಮಾಂತರ** :ಹೆಣ್ಣು ಮಕ್ಕಳಿಗೂ ಸಮಾಜದಲ್ಲಿ ಸಮಾನ ಅವಕಾಶಗಳಿದ್ದು, ಅವಕಾಶಗಳ ಸದುಪಯೋಗ ಪಡೆದುಕಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀಶೈಲ ಭೀಮಸೇನ ಬಾಗಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಹಳಾ ಸಬಲೀಕರಣ ಘಟಕ ಇವರ ಸಹಯೋಗದಲ್ಲಿ ನಡೆದ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯಡಿ ರಾಷ್ಟ್ರೀಯ ಹೆಣ್ಣು ಮಗು ದಿನಾಚರಣೆ ಅಂಗವಾಗಿ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರು ಈಗಲೂ ಕೂಡ ಸಮಾಜದ ಮುಖ್ಯವಾಹಿನಿಗೆ ಬರಲು ಹಿಂಜರಿಯುತ್ತಾರೆ. ಹೆಣ್ಣು ಮಕ್ಕಳಿಗೆ ಸಿಗಬೇಕಾದ ಸೌಲಭ್ಯಗಳು ಸಿಗುತ್ತಿಲ್ಲ. ಸಂಸತ್ ನಲ್ಲಿ 33% ಮೀಸಲಾತಿ ಇದೆ, ಪಂಚಾಯಿತಿಗಳಲ್ಲಿ ಇದೆ, ಆದರೆ ಈಗಲೂ ಕೂಡ ಪಂಚಾಯಿತಿಗಳಲ್ಲಿ ಹೆಣ್ಣು ಮಕ್ಕಳಿಗೆ ಸ್ವತಂತ್ರ ಸಿಕ್ಕಿಲ್ಲ.

ಗ್ರಾಮಗಳಲ್ಲಿ ಇನ್ನೂ ಕೂಡ ಅನಿಷ್ಟ ಪದ್ಧತಿಗಳು ಆಚರಣೆಯಲ್ಲಿವೆ, ಬಾಲ್ಯ ವಿವಾಹ, ಬಾಲ್ಯದಲ್ಲಿ ಗರ್ಭಾವತಿ, ಭ್ರೂಣ ಹತ್ಯೆ, ಮಕ್ಕಳ ಬಲಿ ಕೊಡುವುದು ಇವೆಲ್ಲವು ಕೂಡ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯಗಳು. ಭ್ರೂಣ ಹತ್ಯೆ ನಿಷೇಧ ಕಾಯ್ದೆ ಜಾರಿಗೆ ಬಂದರೂ ಸಹ ಖಾಸಗಿ ಆಸ್ಪತ್ರೆಗಳಲ್ಲಿ ಭ್ರೂಣ ಲಿಂಗ ಪತ್ತೆ ಮಾಡುವರು. ಕಾನೂನಿನ ಮೂಲಕ ತಪ್ಪಿತಸ್ತರಿಗೆ ಶಿಕ್ಷೆ ಆಗುವುದು ಖಚಿತ ಎಂದರು.

ಸರ್ಕಾರಿ ನೌಕರರಾದ ನಾವು ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ತಡೆಯುವುದು, ಅವರ ರಕ್ಷಣೆ ಮಾಡಿ ಸಮಾಜದ ಮುಖ್ಯವಾಹಿನಿಗೆ ತರುವಂತ ಕೆಲಸ ನಮ್ಮೆಲ್ಲರ ಜವಾಬ್ದಾರಿ ಆಗಿದೆ, ಹಾಗಾಗಿ ಹೆಣ್ಣು ಮಕ್ಕಳಿಗೆ ಇರುವಂತಹ ಕಾಯ್ದೆ, ಕಾನೂನು, ಸೌಲಭ್ಯಗಳ ಬಗ್ಗೆ ಅರಿತುಕೊಂಡು ಮಹಿಳೆಯರಿಗೆ ಜಾಗೃತಿ ಮೂಡಿಸುವ ಕೆಲಸ ಆಗಬೇಕಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಮಾತನಾಡಿ ದೇಶದ ಸ್ವಾತಂತ್ರ್ಯ, ಸಮಾನತೆ ಪ್ರತಿಯೊಬ್ಬ ಹೆಣ್ಣು ಮಗುವಿಗೂ ಸಿಗಬೇಕು. ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ತಡೆಯಲು ಅಧಿಕಾರಿಗಳು ಸದಾ ಕಾರ್ಯಪ್ರವೃತ್ತರಾಗಬೇಕು. ಸಾರ್ವಜನಿಕರು ಕೂಡ ಮಕ್ಕಳ ಮೇಲಿನ ದೌರ್ಜನ್ಯ ಕಂಡು ಬಂದಲ್ಲಿ ಸಹಾಯವಾಣಿ 1098 ಸಂಖ್ಯೆಗೆ ಕರೆ ಮಾಡಿ ದೂರು ನೀಡಿ ಮಕ್ಕಳ ರಕ್ಷಣೆಗೆ ಸಹಕಾರ ನೀಡಿ ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮುದ್ದಣ್ಣ, ಮಕ್ಕಳ ರಕ್ಷಣಾಧಿಕಾರಿ ಅನಿತ ಲಕ್ಷ್ಮಿ, ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಕೆಆರ್‌ಟಿಸಿ ಬಸ್ ಹರಿದು 4 ವರ್ಷದ ಕಂದಮ್ಮ ಸಾವು



**ರಾಯಚೂರು:** ಕೆಕೆಆರ್‌ಟಿಸಿ ಬಸ್ ಹರಿದು ನಾಲ್ಕು ವರ್ಷದ ಕಂದಮ್ಮ ಸಾವನ್ನಪ್ಪಿದ ಹೃದಯ ವಿದ್ರಾವಕ ಘಟನೆ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಮದರಕಲ್ ಗ್ರಾಮದಲ್ಲಿ ಸಂಭವಿಸಿದೆ. ಈ ದುರ್ಘಟನೆಯಲ್ಲಿ ಗಬ್ಬೂರು ಗ್ರಾಮದ ವಿದ್ಯಾಶ್ರೀ (4) ಎಂಬ ಪುಟ್ಟ ಮಗು ಸ್ಥಳದಲ್ಲೇ ಮೃತಪಟ್ಟಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ಆವರಿಸಿದೆ.

ಪೊಲೀಸರು ನೀಡಿರುವ ಮಾಹಿತಿ ಪ್ರಕಾರ, ಕೆಕೆಆರ್‌ಟಿಸಿ ಬಸ್ ಗೂಗಲ್‌ನಿಂದ ದೇವದುರ್ಗದ ಕಡೆಗೆ ಸಂಚರಿಸುತ್ತಿತ್ತು. ಮದರಕಲ್ ಗ್ರಾಮದ ಬಳಿ ಬಸ್ ಸಾಗುತ್ತಿರುವ ಸಂದರ್ಭದಲ್ಲಿ, ರಸ್ತೆ ದಾಟಲು ಮುಂದಾದ ಪುಟ್ಟ ಮಗು ಬಸ್ ಬರುತ್ತಿರುವುದನ್ನು ಗಮನಿಸದೆ ಅಚಾನಕವಾಗಿ ಅಡ್ಡ ಬಂದಿದೆ ಎನ್ನಲಾಗಿದೆ. ಈ ವೇಳೆ ಚಾಲಕನಿಗೆ ಬಸ್ ನಿಯಂತ್ರಣಕ್ಕೆ ಅವಕಾಶವೇ ಸಿಗದೆ, ಬಸ್ ಚಕ್ರದಡಿಗೆ ಸಿಲುಕಿದ ಮಗು ಗಂಭೀರ ಗಾಯಗೊಂಡಿದೆ.

ಅಪಘಾತ ಸಂಭವಿಸಿದ ಕೂಡಲೇ ಸ್ಥಳೀಯರು ಮಗು ಜೀವಂತವಿದೆಯೇ ಎಂದು ಪರಿಶೀಲಿಸಿದರೂ, ಆಗಲೇ ಮಗು ಮೃತಪಟ್ಟಿರುವುದು ದೃಢಪಟ್ಟಿದೆ. ಬಸ್‌ನ ಚಕ್ರದಡಿಗೆ ಸಿಲುಕಿದ ಕಾರಣ ವಿದ್ಯಾಶ್ರೀಗೆ ತೀವ್ರ ಗಾಯಗಳಾಗಿದ್ದು, ಆಕೆಯ ಪ್ರಾಣ ಉಳಿಸಲು ಸಾಧ್ಯವಾಗಿಲ್ಲ ಎಂದು ತಿಳಿದುಬಂದಿದೆ.

ಘಟನೆ ಸುದ್ದಿ ತಿಳಿಯುತ್ತಿದ್ದಂತೆ ಕುಟುಂಬಸ್ಥರು ಸ್ಥಳಕ್ಕೆ ಧಾವಿಸಿದ್ದು, ಮಗಳ ಅಕಾಲಿಕ ಸಾವಿನಿಂದ ಪೋಷಕರು ಹಾಗೂ ಸಂಬಂಧಿಕರು ಆಘಾತಕ್ಕೊಳಗಾಗಿದ್ದಾರೆ. ನಾಲ್ಕು ವರ್ಷದ ಪುಟ್ಟ ಮಗುವಿನ ದುರ್ಘಟನೆ ಗ್ರಾಮದ ಜನರನ್ನು ಕಣ್ಣೀರಿನಲ್ಲಿ ಮುಳುಗುವಂತೆ ಮಾಡಿದೆ.

ಈ ಸಂಬಂಧ ಗಬ್ಬೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತಕ್ಕೆ ಕಾರಣವಾದ ಅಂಶಗಳು, ಬಸ್ ಚಾಲಕನ ನಿರ್ಲಕ್ಷ್ಯವಿದೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ರಸ್ತೆ ಸುರಕ್ಷತೆ ಹಾಗೂ ಮಕ್ಕಳ ಮೇಲಿನ ಜಾಗ್ರತೆಯ ಅಗತ್ಯತೆಯನ್ನು ಈ ದುರ್ಘಟನೆ ಮತ್ತೆ ನೆನಪಿಸಿದೆ.

# ಶಿಕ್ಷಕರು ಬೈದಿದ್ದಕ್ಕೆ ಮನನೊಂದು ವಿದ್ಯಾರ್ಥಿ ಆತ್ಮಹತ್ಯೆ



**ಯಾದಗಿರಿ:** ಶಿಕ್ಷಕರು ಬೈದಿದಕ್ಕೆ ಮನನೊಂದು ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾದ ಪ್ರಕರಣದಲ್ಲಿ ಮಹತ್ವದ ಟ್ವಿಸ್ಟ್ ಸಿಕ್ಕಿದ್ದು, ಶಾಲೆಯ ಮುಖ್ಯ ಶಿಕ್ಷಕ ಸೇರಿ ಆರು ಜನರ ವಿರುದ್ಧ ಎಫ್‌ಐಆರ್ ದಾಖಲಾಗಿರುವುದು ಜಿಲ್ಲೆಯಲ್ಲಿ ಸಂಚಲನ ಮೂಡಿಸಿದೆ. ಈ ದುರ್ಘಟನೆ ಯಾದಗಿರಿ ಜಿಲ್ಲೆಯ ವಡಗೇರಾ ಪಟ್ಟಣದ ಸರ್ಕಾರಿ ಪ್ರೌಢ ಶಾಲೆಯಲ್ಲಿ ನಡೆದಿದ್ದು, ಮೃತ ವಿದ್ಯಾರ್ಥಿಯನ್ನು ಪವನ್ (15) ಎಂದು ಗುರುತಿಸಲಾಗಿದೆ. ಪವನ್ 9ನೇ ತರಗತಿಯಲ್ಲಿ ಓದುತ್ತಿದ್ದನು ಎಂದು ತಿಳಿದುಬಂದಿದೆ.

ಪೊಲೀಸ್ ಮಾಹಿತಿ ಪ್ರಕಾರ, ಶಾಲೆಯಲ್ಲಿ ಶಿಕ್ಷಕರು ಬೈದಿದ್ದಕ್ಕೆ ಮನನೊಂದು ಪವನ್ ಶಾಲಾ ಆವರಣದ ಹಿಂಭಾಗದಲ್ಲಿದ್ದ ಗಿಡಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾಗಿದೆ. ಘಟನೆ ಬೆಳಕಿಗೆ ಬಂದಾಗ ಶಾಲೆ ಹಾಗೂ ವಡಗೇರಾ ಪಟ್ಟಣದಲ್ಲಿ ಶೋಕದ ವಾತಾವರಣ ಆವರಿಸಿತ್ತು. ಬಾಲಕನ ಅಕಾಲಿಕ ಸಾವಿನಿಂದ ಪೋಷಕರು, ಸಹಪಾಠಿಗಳು ಹಾಗೂ ಶಿಕ್ಷಕರು ಆಘಾತಕ್ಕೊಳಗಾಗಿದ್ದರು.

ಆದರೆ, ಮಗನ ಸಾವಿನ ಬಗ್ಗೆ ಪೋಷಕರು ಗಂಭೀರ ಅನುಮಾನ ವ್ಯಕ್ತಪಡಿಸಿದ್ದು, ಪ್ರಕರಣಕ್ಕೆ ಹೊಸ ತಿರುವು ದೊರೆತಿದೆ. ಪವನ್ ಆತ್ಮಹತ್ಯೆ ಮಾಡಿಕೊಳ್ಳಲು ಕೇವಲ ಶಿಕ್ಷಕರ ಬೈಗುಳವೇ ಕಾರಣವೇ? ಅಥವಾ ಇನ್ನಾವುದೇ ಮಾನಸಿಕ ಒತ್ತಡ, ಕಿರುಕುಳ ಅಥವಾ ಬೇರೆ ಕಾರಣಗಳಿದೆಯೇ ಎಂಬ ಬಗ್ಗೆ ಸಂಶಯ ವ್ಯಕ್ತಪಡಿಸಿ, ಪವನ್ ತಂದೆ ಮಲ್ಲಪ್ಪ ವಡಗೇರಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಪೋಷಕರ ದೂರಿನನ್ವಯ, ಶಾಲೆಯ ಮುಖ್ಯ ಶಿಕ್ಷಕ ಅಯ್ಯಪ್ಪ ಸೇರಿ ಒಟ್ಟು ಆರು ಮಂದಿ ಶಿಕ್ಷಕರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣದ ತನಿಖೆಯನ್ನು ಪೊಲೀಸರು ಗಂಭೀರವಾಗಿ ಕೈಗೊಂಡಿದ್ದಾರೆ. ವಿದ್ಯಾರ್ಥಿಯ ಮೇಲೆ ನಿರಂತರ ಮಾನಸಿಕ ಒತ್ತಡ ಹೇರಲಾಗಿತ್ತೇ? ತರಗತಿಯಲ್ಲಿ ಅಥವಾ ಶಾಲಾ ವಾತಾವರಣದಲ್ಲಿ ಯಾವುದೇ ರೀತಿಯ ಕಿರುಕುಳ ನಡೆದಿತ್ತೇ ಎಂಬ ಅಂಶಗಳ ಬಗ್ಗೆ ತನಿಖೆ ನಡೆಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ನಿಜವಾಗಿ ಶಿಕ್ಷಕರ ಬೈಗುಳವೇ ಆತ್ಮಹತ್ಯೆಗೆ ಕಾರಣವಾಗಿದೆಯೇ ಅಥವಾ ಬೇರೆ ಯಾವ ಅಡಗಿದ ಕಾರಣಗಳಿವೆಯೇ ಎಂಬುದನ್ನು ಪತ್ತೆಹಚ್ಚಲು, ವಿದ್ಯಾರ್ಥಿಯ ಸ್ನೇಹಿತರು, ಶಿಕ್ಷಕರು ಹಾಗೂ ಕುಟುಂಬಸ್ಥರ ಹೇಳಿಕೆಗಳನ್ನು ಪೊಲೀಸರು ದಾಖಲಿಸಲಿದ್ದಾರೆ. ತನಿಖೆ ಪೂರ್ಣಗೊಂಡ ಬಳಿಕವೇ ಪ್ರಕರಣದ ನಿಖರ ಸತ್ಯಾಂಶ ಹೊರಬೀಳಲಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

# ಜೈನಹಳ್ಳಿ ಗ್ರಾಮದಲ್ಲಿ ನವಗ್ರಹ ದೇವಸ್ಥಾನ ಹಾಗೂ ನಾಗ ಬನ ಉದ್ಘಾಟನೆ



**ಕೃಷ್ಣರಾಜಪೇಟೆ** :ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಜೈನಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ನವಗ್ರಹ ದೇವಸ್ಥಾನ ಹಾಗೂ ನಾಗದೇವತೆ ದೇವಾಲಯ ಉದ್ಘಾಟನೆ ಹಾಗೂ ವಿಗ್ರಹ ಪ್ರತಿಷ್ಠಾಪನಾ ಸಮಾರಂಭವು ಶ್ರದ್ಧಾಭಕ್ತಿಯಿಂದ ನಡೆಯಿತು

ಗ್ರಾಮದ ಮುಖಂಡರು ಹಾಗೂ ಭಕ್ತಾದಿಗಳ ಸಹಕಾರದೊಂದಿಗೆ ನಡೆದ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಶಾಸ್ತ್ರೋಕ್ತವಾಗಿ ವಿವಿಧ ಹೋಮ-ಹವನಗಳನ್ನು ನೆರವೇರಿಸುವ ಮೂಲಕ ನವಗ್ರಹ ವಿಗ್ರಹಗಳನ್ನು ಹಾಗೂ ನಾಗರ ಕಲ್ಲುಗಳನ್ನು ಪ್ರತಿಷ್ಠಾಪಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ನಿವೃತ್ತ ಮುಖ್ಯ ಶಿಕ್ಷಕ ಜೆ.ಎಸ್. ಲಿಂಗರಾಜೇಗೌಡ ಅವರು ಗ್ರಾಮಗಳಲ್ಲಿ ದೇವಾಲಯಗಳ ನಿರ್ಮಾಣದಿಂದ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗುತ್ತದೆ. ನವಗ್ರಹಗಳ ಆರಾಧನೆಯು ಮನುಷ್ಯನ ಮನಸ್ಸಿಗೆ ಶಾಂತಿ ಮತ್ತು ನೆಮ್ಮದಿ ಹಾಗೂ ಆತ್ಮಸ್ಥೆರ್ಯವನ್ನು ನೀಡುತ್ತದೆ. ನಮ್ಮ ಜೈನಹಳ್ಳಿ ಗ್ರಾಮದ ಜನರು ಒಗ್ಗಟ್ಟಾಗಿ ವಿವಿಧ ಗ್ರಾಮಗಳ ಧಾನಿಗಳ ನೆರವು ಪಡೆದು ಇಂತಹ ಪುಣ್ಯದ ಕಾರ್ಯವನ್ನು ಮಾಡಿರುವುದು ಶ್ಲಾಘನೀಯ ಎಂದು ತಿಳಿಸಿದರು. ನಾಗಾರಾಧನೆ ಮತ್ತು ನವಗ್ರಹಗಳ ಪೂಜೆ ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗ ಇಂದಿನ ಯುವ ಪೀಳಿಗೆಗೆ ಇಂತಹ ಧಾರ್ಮಿಕ ಸಂಸ್ಕಾರಗಳನ್ನು ಪರಿಚಯಿಸುವುದು ಅಗತ್ಯವಿದೆ. ಈ ದೇವಸ್ಥಾನವು ಕೇವಲ ಪೂಜಾ ಸ್ಥಳವಾಗದೆ, ಗ್ರಾಮದ ಏಕತೆಯ ಸಂಕೇತವಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ದೇವಾಲಯಗಳ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ಹೆಚ್.ಟಿ.ಮಂಜು, ಸಮಾಜ ಸೇವಕ ಆರ್.ಟಿ.ಓ. ಮಲ್ಲಿಕಾರ್ಜುನ್, ಮನ್‌ಮುಲ್ ನಿರ್ದೇಶಕ ಡಾಲು ರವಿ, ದಾನಿಗಳಾದ ರೈಲ್ವೆ ಇಲಾಖೆಯ ರಶ್ಮಿಶರತ್, ಬಿ.ಎಸ್.ಎನ್.ಎಲ್. ಎಕ್ಸಿಕ್ಯೂಟೀವ್ ಇಂಜಿನಿಯರ್ ಜಿ.ಎಸ್.ಲೋಕೇಶ್, ರಾಜೀವ್ ಗಾಂಧೀ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಪರಶುರಾಮೇಗೌಡ, ಜೈನ್ನಹಳ್ಳಿ ವಿ.ಎಸ್.ಎಸ್.ಎನ್. ನಿರ್ದೇಶಕ ಧರಣೇಶ್, ಮೈಸೂರು ಜ್ಞಾನಬುತ್ತಿ ಸಂಸ್ಥೆಯ ವ್ಯವಸ್ಥಾಪಕ ಸತ್ಯನಾರಾಯಣಗೌಡ, ನಿವೃತ್ತ ಪ್ರಾಂಶುಪಾಲ ಜಿ.ಜೆ.ರಾಜೇಗೌಡ, ಗ್ರಾ.ಪಂ.ಉಪಾಧ್ಯಕ್ಷೆ ನಾಗಮ್ಮ ಜಲೇಂದ್ರ, ಸುದ್ರೇಶ್, ತಾರಾಶ್ರೀ ಮುಕುಂದ, ಎಸ್. ರಾಜೇಗೌಡ, ತಿಮ್ಮಪ್ಪಗೌಡ, ಗೀತಾ ಮಂಜುನಾಥ್, ಜೆ.ಎಸ್. ರಾಮಕೃಷ್ಣೇಗೌಡ, ವಿ.ಆರ್. ನಾರಾಯಣ, ಜೆ.ಎನ್. ಚಂದ್ರೇಗೌಡ, ನೀಲಕಂಠಶಾಸ್ತ್ರಿ, ಜೆ.ಬಿ. ಬೋರೇಗೌಡ, ಜೆ.ಎನ್. ಶೇಷಾದ್ರಿಗೌಡ, ಗೌಡಪ್ಪ, ಬಸವರಾಜು, ಪ್ರಸನ್ನ ಜೆ.ಸಿ. ಕಮಲಮ್ಮ, ಮನು, ಲೋಹೀತ್. ಜೆ.ಎನ್, ಜೆ.ಆರ್.ಅಶೋಕ್, ಆಟೋ ತಿಮ್ಮಪ್ಪಗೌಡ, ಜೆ.ವಿ.ರಾಘವೇಂದ್ರ, ಜೆ.ಎಂ. ಸಚಿನ್, ಲಕ್ಷಮ್ಮ, ಮರಲಿಂಗ ಮುಕುಂದ, ಕೆ.ಎಸ್. ವೀಣಾ, ಜೆ.ಎನ್. ರಮೇಶ್, ಜೆ. ಆರ್. ಚಂದ್ರೇಗೌಡ, ಜೆ.ಎಂ.ಚಂದನ್ ಸೇರಿದಂತೆ ಅಕ್ಕಪಕ್ಕದ ಗ್ರಾಮಫಲ ಸಾವಿರಾರು ಭಕ್ತಾದಿಗಳು ಹಾಗೂ ಗಣ್ಯರು ಭಾಗವಹಿಸಿದ್ದರು.

ಅಕ್ಕಿಹೆಬ್ಬಾಳು ಹೋಬಳಿಯ ಜೈನ್ನಹಳ್ಳಿ, ಹಳೆಮುದ್ಲಾಪುರ, ಹೊಸ ಮುದ್ಲಾಪುರ, ಸಿಂಗನಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳ ಸಾವಿರಾರು ಭಕ್ತಾಧಿಗಳು ಪಾಲ್ಗೊಂಡು ದೇವರ ದರ್ಶನ ಪಡೆದರು. ದೇವರಿಗೆ ಪೂಜೆ ಸಲ್ಲಿಸಿ ಪುನೀತರಾದರು. ಸಂಭ್ರಮದಲ್ಲಿ ಆಗಮಿಸಿದ್ದ ನೂರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

# ಸಿರಿಧಾನ್ಯದಿಂದ ಮೈಕ್ರೋಚಿಪ್ ವರೆಗೆ ಸ್ತಬ್ಧಚಿತ್ರ - ಭಾರತ ಪರ್ವದಲ್ಲಿ ಪ್ರದರ್ಶನ




**ನವದೆಹಲಿ / ಬೆಂಗಳೂರು:** ಭಾರತವನ್ನು ಆತ್ಮನಿರ್ಭರ ರಾಷ್ಟ್ರವನ್ನಾಗಿಸುವ ದಿಶೆಯಲ್ಲಿ ಕರ್ನಾಟಕದಂತಹ ಸ್ವಾವಲಂಬಿ ರಾಜ್ಯಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕೃಷಿಯಿಂದ ಕೈಗಾರಿಕೆವರೆಗೆ ಹಾಗೂ ಆಧುನಿಕ ತಂತ್ರಜ್ಞಾನದ ಬಳಕೆಯಲ್ಲಿ ನಮ್ಮ ರಾಜ್ಯ ಮುಂಚೂಣಿಯಲ್ಲಿದೆ. ಈ ಪಯಣವನ್ನು ಸಂಕೇತಿಸುವಂತೆ, ಸಿರಿಧಾನ್ಯದಿಂದ ಮೈಕ್ರೋಚಿಪ್ ವರೆಗೆ (ಮಿಲ್ಲೆಟ್ ಟು ಮೈಕ್ರೋಚಿಪ್) ಎನ್ನುವ ಸ್ತಬ್ಧಚಿತ್ರವನ್ನು 2026ರ ಜನವರಿ 26 ರಂದು ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವದ ಅಂಗವಾಗಿ ಕೆಂಪು ಕೋಟೆಯಲ್ಲಿ ಆಯೋಜಿಸುವ ಭಾರತ ಪರ್ವ ದಲ್ಲಿ ಕರ್ನಾಟಕವು ಪ್ರದರ್ಶಿಸುತ್ತಿದೆ.

ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಭಾರತ ಪರ್ವದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟ್ಯಪೂರ್ಣ ಸ್ತಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದೆ. ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲುಗಳನ್ನು ಸ್ಥಾಪಿಸುತ್ತಲೇ ಸಾಗಿದೆ. ಈ ಬಾರಿ ಕೃಷಿ, ಶಿಕ್ಷಣ, ವಿಜ್ಞಾನ, ಉನ್ನತ ತಂತ್ರಜ್ಞಾನ ಹಾಗೂ ಮೈಕ್ರೋಚಿಪ್‌ಗಳ ಉತ್ಪಾದನೆಯಲ್ಲಿ ಸಾಧಿಸಿರುವ ಸಮತೋಲನಯುತ ಪ್ರಗತಿಯನ್ನು ಸ್ತಬ್ಧಚಿತ್ರದಲ್ಲಿ ತೋರಿಸಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್ ಅವರು ತಿಳಿಸಿದ್ದಾರೆ.

ಸಿರಿಧಾನ್ಯಗಳ ಉತ್ಪಾದನೆ ಮತ್ತು ಪೌಷ್ಟಿಕ ಆಹಾರದ ಬಳಕೆಯನ್ನು ಉತ್ತೇಜಿಸುವಲ್ಲಿ ಕರ್ನಾಟಕವು ದೇಶದ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಬೆಂಗಳೂರು ಜಾಗತಿಕವಾಗಿ ಗಮನ ಸೆಳೆದಿದೆ. ಮೈಕ್ರೋಚಿಪ್, ಎಲೆಕ್ಟ್ರಾನಿಕ್ಸ್ ಹಾಗೂ ಸೆಮಿಕಂಡಕ್ಟರ್ ವಲಯಗಳಲ್ಲಿನ ಆವಿಷ್ಕಾರಗಳು ಕರ್ನಾಟಕವನ್ನು ಶ್ರೇಷ್ಠ ತಂತ್ರಜ್ಞಾನ ಕೇಂದ್ರವಾಗಿಸಿದೆ. ಇವೆಲ್ಲವೂ ಈ ಬಾರಿ ಸ್ತಬ್ಧಚಿತ್ರದಲ್ಲಿ ಮೇಳೈಸಿವೆ.

ಸಂಶೋಧನೆ, ನವೀನತೆ ಮತ್ತು ಕೌಶಲ್ಯಾಭಿವೃದ್ಧಿಗೆ ನೀಡಲಾಗಿರುವ ವಿಶೇಷ ಆದ್ಯತೆಯ ಮೂಲಕ ಯುವಶಕ್ತಿಗೆ ಉದ್ಯಮಶೀಲ ಅವಕಾಶಗಳನ್ನು ಒದಗಿಸಿ, ಭವಿಷ್ಯದ ಆರ್ಥಿಕತೆಗೆ ಭದ್ರ ಬುನಾದಿಯನ್ನು ಕರ್ನಾಟಕ ನಿರ್ಮಿಸುತ್ತಿದೆ. ಹೂಡಿಕೆ ಸ್ನೇಹಿ ನೀತಿಗಳ ಮೂಲಕ ಉತ್ಪಾದನಾ ವಲಯದಲ್ಲಿ ಗರಿಷ್ಠ ಬೆಳವಣಿಗೆಯನ್ನು ಸಾಧಿಸಿರುವ ಕರ್ನಾಟಕವು ಕೈಗಾರಿಕಾ ಅಭಿವೃದ್ಧಿಯಲ್ಲಿಯೂ ಮುಂಚೂಣಿಯಲ್ಲಿದೆ. ಜೊತೆಗೆ, ಸ್ಟಾರ್ಟ್ ಅಪ್ ಕ್ಯಾಪಿಟಲ್ ಆಫ್ ಇಂಡಿಯಾ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ರಾಜ್ಯವು ನವ ದೆಹಲಿಯಲ್ಲಿ ಪ್ರದರ್ಶಿಸುತ್ತಿರುವ ಈ ಸ್ತಬ್ಧಚಿತ್ರವು ಎಲ್ಲರ ಮನಸೂರೆಗೊಳ್ಳಲಿದೆ ಎಂದು ವಾರ್ತಾ ಇಲಾಖೆಯ ಆಯುಕ್ತರು ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

ದೆಹಲಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರದ ವಿಷಯದ ಆಯ್ಕೆ, ವಿನ್ಯಾಸ, ಕೇಂದ್ರ ಸರ್ಕಾರ ರಕ್ಷಣಾ ಸಚಿವಾಲಯದಲ್ಲಿ ಅದರ ಅನುಮೋದನೆ, ನಿರ್ಮಾಣ, ಪಾಲ್ಗೊಳ್ಳುವಿಕೆ ಹೀಗೆ ಎಲ್ಲಾ ಹಂತಗಳಲ್ಲೂ 'ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೇ ಸಕ್ರಿಯವಾಗಿ ಪಾಲ್ಗೊಳ್ಳುತ್ತದೆ. ಅಲ್ಲದೆ, ಇಲಾಖೆಯು ಕಳೆದ 16 ವರ್ಷಗಳಿಂದ ನಿರಂತರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಭಾರತ ಪರ್ವದ ಪ್ರದರ್ಶನದಲ್ಲಿ (2024 ಮತ್ತು 2026ರಲ್ಲಿ) ಪಾಲ್ಗೊಳ್ಳುತ್ತಿದೆ. ಇದು ಕನ್ನಡಿಗರೆಲ್ಲರೂ ಹೆಮ್ಮೆಪಡುವ ಸಂಗತಿ ಎಂದು ಹೇಳಿದ್ದಾರೆ.

**2026ರ ಜನವರಿ 26ರಂದು ನಡೆಯುವ ದೆಹಲಿ ಗಣರಾಜ್ಯೋತ್ಸವದ ಸ್ತಬ್ಧಚಿತ್ರಕ್ಕಾಗಿ ಇಲಾಖೆಯು**

**1. ಕಿತ್ತೂರು ರಾಣಿ ಚೆನ್ನಮ್ಮ ಮತ್ತು ರಾಣಿ ಅಬ್ಬಕ್ಕದೇವಿ**

**2. ಕರ್ನಾಟಕ ಪುಷ್ಪ ವೈಭವ**

**3. ಹಲಗಲಿ ಬೇಡರು**

**4.'ಸಿರಿಧಾನ್ಯದಿಂದ ಮೈಕ್ರೋಚಿಪ್' ವರೆಗೆ ಎಂಬ ನಾಲ್ಕು ವಿಷಯಗಳನ್ನು ಆಯ್ಕೆ ಮಾಡಿ ಕಳುಹಿಸಿತ್ತು.**

ಮೊದಲ ಸಭೆಯಲ್ಲಿಯೇ ಸಿರಿಧಾನ್ಯದಿಂದ ಮೈಕ್ರೋಚಿಪ್ ವರೆಗೆ ಎಂಬ ವಿಷಯವನ್ನು ಪರಿಣತರ ಸಮಿತಿಯು ಒಮ್ಮತದಿಂದ ಅಂತಿಮಗೊಳಿಸಿತ್ತು. ಅದಕ್ಕನುಗುಣವಾಗಿ ಮಣ್ಣಿನಲ್ಲಿ ಸಿರಿಧಾನ್ಯಗಳನ್ನು ಬೆಳೆಸಿದ ದೇಶೀಯ ಜ್ಞಾನದಿಂದ ಮೈಕ್ರೋಚಿಪ್‌ಗಳನ್ನು ಉತ್ಪಾದಿಸುವ ಸೂಕ್ಷ್ಮತೆಯನ್ನು ಈ ಸ್ತಬ್ಧಚಿತ್ರ ಮನಮುಟ್ಟುವಂತೆ ಕಟ್ಟಿಕೊಡುತ್ತದೆ.

ವಿಷಯ ಆಯ್ಕೆಯ ಬಳಿಕ ಅದನ್ನು ವಿವಿಧ ಸ್ತರಗಳನ್ನು ನಿರೂಪಿಸಬೇಕಾಗಿತ್ತು. ಕರ್ನಾಟಕದ ಬಗೆಗಿನ ಅಭಿಮಾನ, ನಾಡಿನ ಹಿರಿಮೆ ಹಾಗೂ ಸಂಸ್ಕೃತಿಯ ಮಹತ್ವವನ್ನು ಎತ್ತಿಹಿಡಿಯುವ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಪ್ರೋತ್ಸಾಹದ ನುಡಿಗಳೇ ಈ ಸವಾಲಿನ ಕೆಲಸಕ್ಕೆ ಮುನ್ನುಡಿ ಬರೆದವು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀಮತಿ ಬಿ.ಬಿ. ಕಾವೇರಿ ಅವರ ಸಲಹೆ - ಸೂಚನೆಗಳು ಸ್ತಬ್ಧಚಿತ್ರದ ಕೆಲಸವನ್ನು ಸುಗಮವಾಗಿಸಿತ್ತು ಎಂದು ವಾರ್ತಾ ಇಲಾಖೆಯ ಆಯುಕ್ತರು ಹೇಳಿದರು.

**ಸ್ತಬ್ಧಚಿತ್ರದಲ್ಲಿ ಏನಿರಲಿದೆ:** ಸ್ತಬ್ಧಚಿತ್ರದ ಮುಂಭಾಗದಲ್ಲಿ ಉದಯಿಸುತ್ತಿರುವ ಸೂರ್ಯ ನಿರಂತರ ಪ್ರಗತಿ ಮತ್ತು ಚಲನಶೀಲತೆಯ ಸಂಕೇತವಾಗಿ ಹೊಳೆಯುತ್ತಿದೆ. ದೊಡ್ಡ ಮಡಿಕೆಗಳಲ್ಲಿ ಪ್ರದರ್ಶಿಸಲಾದ ವಿವಿಧ ಸಿರಿಧಾನ್ಯಗಳು ಕೃಷಿ ಸಮೃದ್ಧಿಯನ್ನು ತೋರಿಸುತ್ತವೆ. ಬೆಳೆದ ಫಸಲನ್ನು ಎತ್ತಿಹಿಡಿದಿರುವ ರೈತ, ಆತನ ಪತ್ನಿ ಹಾಗೂ ಉಲ್ಲಾಸದಿಂದ ಕಾಣಿಸುತ್ತಿರುವ ಮಕ್ಕಳು ಗ್ರಾಮೀಣ ಶಕ್ತಿಯ ಜೀವಂತ ಚಿತ್ರಣವಾಗಿದ್ದಾರೆ.

ಮಧ್ಯಭಾಗದಲ್ಲಿ ತಿರುಗುತ್ತಿರುವ ಅಣುವಿನ ಮಾಲಿಕ್ಯೂಲ್‌ಗಳ ಮಾದರಿ ತಂತ್ರಜ್ಞಾನ ಪ್ರಗತಿಯನ್ನು ಸೂಚಿಸುತ್ತದೆ. ಕೃತಕ ಬುದ್ಧಿಮತ್ತೆಯ ರೋಬೋಟ್ ಕಂಪ್ಯೂಟರ್ ನಲ್ಲಿ ಕಾರ್ಯನಿರ್ವಹಿಸುತ್ತಿರುವುದು ಭವಿಷ್ಯದ ಆವಿಷ್ಕಾರಗಳ ಸಂಕೇತವಾಗಿದೆ. ಇಕ್ಕೆಲಗಳಲ್ಲಿ ಬಾಹ್ಯಾಕಾಶ ಕ್ಷೇತ್ರವನ್ನು ಪ್ರತಿನಿಧಿಸುವ ರಾಕೆಟ್ ಮತ್ತು ವಿಜ್ಞಾನಿ, ಟೆಲಿಮೆಡಿಸಿನ್ ಮೂಲಕ ಮಾರ್ಗದರ್ಶನ ನೀಡುತ್ತಿರುವ ವೈದ್ಯೆ ಹಾಗೂ ಕೃಷಿಭೂಮಿಯಲ್ಲಿ ಡ್ರೋನ್ ಬಳಸುತ್ತಿರುವ ಮಹಿಳೆಯು ವಿಜ್ಞಾನ, ಆರೋಗ್ಯ ಮತ್ತು ಆಧುನಿಕ ಕೃಷಿಯ ಸಮನ್ವಯವನ್ನು ತೋರಿಸುತ್ತಾರೆ. ಕೈಗಾರಿಕಾ ವಲಯವನ್ನು ಪ್ರತಿನಿಧಿಸುವಂತೆ ಯಂತ್ರೋಪಕರಣಗಳೊಂದಿಗೆ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರು ಉತ್ಪಾದನಾ ಶಕ್ತಿಗೆ ಸಾಕ್ಷಿಯಾಗಿದ್ದಾರೆ.

ಇಡೀ ಸ್ತಬ್ಧಚಿತ್ರದ ಆಕರ್ಷಣೆಯ ಕೇಂದ್ರಬಿಂದುವಾಗಿ ಕೊನೆಯಲ್ಲಿ ಮಿನುಗುತ್ತಿರುವ ಮೈಕ್ರೋಚಿಪ್ ಹಾಗೂ ಬಂಗಾರದ ಬಣ್ಣದ ಸರ್ಕ್ಯೂಟ್‌ಗಳ ಮಧ್ಯೆ ರೋಬೋಟ್‌ನ ಮುಖವನ್ನು ಸಾಂಕೇತಿಕವಾಗಿ ಚಿತ್ರಿಸಲಾಗಿದೆ. ಇದು ಪರಂಪರೆಯಿಂದ ಪ್ರಗತಿಯತ್ತ, ಮಣ್ಣಿನಿಂದ ಯಂತ್ರಗಳತ್ತ ಸಾಗುತ್ತಿರುವ ಕರ್ನಾಟಕದ ಆತ್ಮನಿರ್ಭರ ಪಯಣದ ಸಾರವಾಗಿದೆ.

**ತೀವ್ರ ಪೈಪೋಟಿ:** ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಸ್ತಬ್ಧಚಿತ್ರದೊಂದಿಗೆ ಭಾಗವಹಿಸುವುದು ಪ್ರತಿ ರಾಜ್ಯಕ್ಕೂ ಹೆಮ್ಮೆಯ ಮತ್ತು ಪ್ರತಿಷ್ಠೆಯ ಸಂಕೇತ. ಹಿಂದೆ ಎಲ್ಲಾ ರಾಜ್ಯಗಳಿಗೂ ಪಥಸಂಚಲನದಲ್ಲಿ ಭಾಗವಹಿಸಲು ಅವಕಾಶವಿತ್ತು. ಭದ್ರತೆ ಮತ್ತು ಗಣರಾಜ್ಯೋತ್ಸವದ ಅವಧಿಯಲ್ಲಿ ಮಾಡಿದ ಇಳಿಕೆ, ಪ್ರಾತಿನಿಧ್ಯತೆಯಿಂದಾಗಿ ಸ್ತಬ್ಧಚಿತ್ರಕ್ಕಾಗಿ ಪ್ರತಿನಿಧಿಸುವ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಂಖ್ಯೆಯನ್ನು ರಕ್ಷಣಾ ಸಚಿವಾಲಯವು 2022ನೇ ಸಾಲಿನಿಂದ 15 ಕ್ಕೆ ಇಳಿಸಿದೆ.

2024ರಲ್ಲಿ ಭಾರತ ಸರ್ಕಾರದ ರಕ್ಷಣಾ ಸಚಿವಾಲಯವು ಎಲ್ಲಾ ರಾಜ್ಯಗಳಿಗೂ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಸ್ತಬ್ಧಚಿತ್ರದೊಂದಿಗೆ ಪಾಲ್ಗೊಳ್ಳಲು ಸಮಾನ ಅವಕಾಶ ಕಲ್ಪಿಸಲು ಆವರ್ತನ ಮಾದರಿಯಲ್ಲಿ ಒಂದು ವರ್ಷ ಪಥಸಂಚಲನ ಮತ್ತು ಅದರ ಮುಂದಿನ ವರ್ಷ ಭಾರತ ಪರ್ವದಲ್ಲಿ ಪ್ರದರ್ಶಿಸುವಂತೆ ಎಲ್ಲಾ ರಾಜ್ಯಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ.

ಹೀಗಾಗಿ, ಇದು ತೀವ್ರ ಪೈಪೋಟಿಗೆ ಕಾರಣವಾಗಿದೆ. ಅಷ್ಟೇ ಅಲ್ಲದೆ ಗುಣಮಟ್ಟಕ್ಕೆ, ವಿನ್ಯಾಸಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಸ್ತಬ್ಧಚಿತ್ರಕ್ಕಾಗಿ ಪ್ರಶಸ್ತಿ ಪಡೆದುಕೊಳ್ಳುವುದಕ್ಕಿಂತಲೂ ಪಥಸಂಚಲನ ಮತ್ತು ಪ್ರದರ್ಶನದಲ್ಲಿ ಭಾಗವಹಿಸುವುದೇ ಪ್ರತಿಷ್ಠೆಯ ಸಂಕೇತವಾಗಿದೆ. ಇಂತಹ ಕಠಿಣ ಪರೀಕ್ಷೆಯಲ್ಲಿ ಕರ್ನಾಟಕವು 16 ಬಾರಿ ಭಾಗವಹಿಸಿ, ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದೆ.

**ಪ್ರಶಸ್ತಿಗಳ ಸರಮಾಲೆ:** 2022ರಲ್ಲಿ ಇಲಾಖೆಯು ಪ್ರದರ್ಶಿಸಿದ್ದ ಸಾಂಪ್ರದಾಯಿಕ ಕಸೂತಿ ತೊಟ್ಟಿಲು ಗೆ ದ್ವಿತೀಯ ಪ್ರಶಸ್ತಿ, 2015ರಲ್ಲಿ ರಾಜ್ಯವು ಚನ್ನಪಟ್ಟಣದ ಗೊಂಬೆಗಳಿಗೆ ತೃತೀಯ, 2012ರಲ್ಲಿ ದಕ್ಷಿಣ ಕನ್ನಡ ಭೂತಾರಾಧನೆಗೆ ತೃತೀಯ, 2011ರಲ್ಲಿ ಬೀದರ್ ನ ಪಾರಂಪರಿಕ ಕಲೆಯಾದ ಬಿದರಿ ಸ್ತಬ್ಧಚಿತ್ರಕ್ಕೆ ದ್ವಿತೀಯ ಮತ್ತು 2008ರಲ್ಲಿ ಹೋಯ್ಸಳ ವಾಸ್ತುಶಿಲ್ಪ ಕ್ಕೆ ದ್ವಿತೀಯ ಪ್ರಶಸ್ತಿ ಸಂದಿತ್ತು. 2005ರಲ್ಲಿ ವೈರಾಗ್ಯಮೂರ್ತಿ ಬಾಹುಬಲಿಯ ಮಹಾಮಸ್ತಕಾಭಿಷೇಕ ದ ಸ್ತಬ್ಧಚಿತ್ರಕ್ಕೆ ಪ್ರಥಮ ಪ್ರಶಸ್ತಿ ದೊರೆತಿತ್ತು. 2008ರಲ್ಲಿ ಹೊಯ್ಸಳ ಕಲೆಯ ಸ್ತಬ್ಧಚಿತ್ರವು ದ್ವಿತೀಯ ಪ್ರಶಸ್ತಿಯ ಜೊತೆಗೆ ಅತ್ಯುತ್ತಮ ನಿರೂಪಣೆ ಮತ್ತು ಅತ್ಯುತ್ತಮ ಫ್ಯಾಬ್ರಿಕೇಷನ್‌ಗಾಗಿ ಪ್ರಶಸ್ತಿ ಲಭಿಸಿತ್ತು. ಒಂದೇ ಸ್ತಬ್ಧಚಿತ್ರಕ್ಕಾಗಿ ಮೂರು ಪ್ರಶಸ್ತಿಗಳನ್ನು ಪಡೆದಂತಹ ಅಪರೂಪದ ಸಾಧನೆಯನ್ನು ನಮ್ಮ ರಾಜ್ಯವು ಮಾಡಿದೆ ಎನ್ನುವುದು ಹೆಮ್ಮೆಯ ಸಂಗತಿ ಎಂದು ಆಯುಕ್ತರು ತಿಳಿಸಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812 / 8217606793
9480867498

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.